**ಸಾಕ್ಷಿಯನ್ನು ದಿಃ 16.07.2025 ರಂದು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಪಾಟೀ ಸವಾಲುಃ ಎದುರುದಾರರ ಪರ ಶ್ರೀ ಎಂ.ಎಂ ವಕೀಲರಿಂದಃ**

1.ಈ ಪ್ರಕರಣಕ್ಕೊಸ್ಕರ ನಾನು ಎದುರುದಾರರು ವಾಹನವನ್ನು ಅತಿ ವೇಗ ಹಾಗೂ ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಅಪಘಾತಪಡಿಸಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಿಂದ ನನ್ನ ಕೈ ಮುರಿಯಿತು ಮೂಳೆ ಮುರಿತ ಆಗಿದೆ, ಶಸ್ತ್ರ ಚಿಕಿತ್ಸೆ ಆಗಿದೆ ಎಂದು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಪರಿಹಾರ ಪಡೆಯುವ ಉದ್ದೇಶದಿಂದ ಔಷದಿ ಬಲ್ಲುಗಳನ್ನು ಈ ಕೇಸಿಗಾಗಿ ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಅಟೆಂಡರ್ ಆಗಿ ಕೆಲಸ ಮಾಡುವ ಬಗ್ಗೆ ದಾಖಲೆ ಇದೆ. ನ್ಯಾಯಾಲಯಕ್ಕೆ ಹಾಜರುಪಡಿಸುತ್ತೇನೆ. ನನ್ನ ಪ್ರಮಾಣ ಪತ್ರದಲ್ಲ ತೋರಿಸುವಂತೆ ನನಗೆ ತಿಂಗಳಿಗೆ 30,000/- ಆದಾಯ ಇಲ್ಲ ಎಂದರೆ ಸರಿಯಲ್ಲ.

2. ನಾನೇ ಅತಿ ವೇಗವಾಗಿ ವಾಹನ ಚಲಾಯಿಸಿ ಎಂದುರುದಾರರಿಗೆ ಡಿಕ್ಕಿ ಪಡಿಸಿ ಎಂದುರುದಾರಗೆ ಗಾಯ ಉಂಟು ಮಾಡಿರುತ್ತೇನೆ ಎಂದರೆ ಸರಿಯಲ್ಲ. ಈ ಪ್ರಕಾರ ಎದುರುದಾರರು ಎಮ್ ಎಲ್ ಸಿ ನೊಂದಣಿ ಮಾಡಿಸಿದ್ದಾರೆ ಎಂದರೆ ಸಾಕ್ಷಿಯು ನಾನು ಸಹ ಎಂ ಎಲ್ ಸಿ ನೊಂದಾಯಿಸಿ ಹಾಜರುಪಡಿಸಿದ್ದೇನೆ ಎನ್ನುತ್ತಾರೆ. ಎದುರುದಾರರು ಚಿಕಿತ್ಸೆ ಪಡೆಯುತ್ತಿದ್ದ ಕಾರಣ ದೂರು ದಾಖಲು ಮಾಡದೆ ಇದ್ದು ಅದರ ದುರುಪಯೋಗ ಪಡಿಸಿಕೊಂಡು ನಾನು ದೂರು ದಾಖಲಿಸಿ ಈ ಸುಳ್ಳು ಪ್ರಕರಣ ಹೂಡಿದ್ದೇನೆ ಎಂದರೆ ಸರಿಯಲ್ಲ. ಪ್ರಸುತ್ತ ಅರ್ಜಿಯಲ್ಲಿ ಕೋರಿರುವ ಪರಿಹಾರ ಪಡೆಯಲು ನಾನು ಅರ್ಹನಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.